ಆ) ಅನುಷ್ಠಾನಗೊಳಿಸಲಾಗಿದ್ದರೆ, ಕನ್ನಡವನ್ನು ನಿರ್ಲಕ್ಷಿಸುತ್ತಿರುವಂತಹ ಸರ್ಕಾರದ ಉನ್ನತ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ ;

ಇ) ಹಾಗಿದ್ದಲ್ಲಿ, ಇದುವರೆಗೂ ಕ್ರಮ ಕೈಗೊಂಡಿರುವ ಅಧಿಕಾರಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

ಈ) ಇದುವರೆಗೂ ಆಡಳಿತದಲ್ಲಿ ಕನ್ನಡ ಭಾಷೆಯನ್ನು ಉಲ್ಲಂಘಿಸಿರುವುದನ್ನು ಪತ್ತೆ ಹಚ್ಚಲಾಗಿರುವ ಪ್ರಕರಣಗಳೆಷ್ಟು; (ವಿವರ ನೀಡುವುದು)

ಶ್ರೀ ಎನ್. ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಸರ್ಕಾರದ ಎಲ್ಲಾ ಹಂತಗಳಲ್ಲಿ ಕನ್ನಡ ಭಾಷೆಯನ್ನು ಆಡಳಿತದಲ್ಲಿ ಬಹುತೇಕ ಅನುಷ್ಠಾನಗೊಳಿಸಲಾಗಿದೆ.

ಆ) ಕನ್ನಡವನ್ನು ನಿರ್ಲಕ್ಷಿಸುತ್ತಿರುವ ಉನ್ನತ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಶಿಸ್ತು ಪ್ರಾಧಿಕಾರಕ್ಕೆ ಸೂಚಿಸಲಾಗಿದೆ.

ಇ) ಈವರೆಗೆ ಕನ್ನಡ ಭಾಷೆಯನ್ನು ಆಡಳಿತದಲ್ಲಿ ನಿರ್ಲಕ್ಷಿಸುತ್ತಿರುವ 16 ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳಲಾಗಿದೆ.(ವಿವರಗಳು ಅನುಬಂಧ–ಅ) ಹಾಗೂ ಅವರಿಗೆ ಸೂಕ್ತ ಎಚ್ಚರಿಕೆ/ ತಿಳುವಳಿಕೆ ನೀಡಲಾಗಿದೆ.

ಈ) ಈವರೆಗೆ 73 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ.(ವಿವರಗಳು ಅನುಬಂಧ – ಬಿ)

309(893) ಶ್ರೀ ಪಾಟೀಲ್ ಎಸ್.ಎಸ್.(ಮುಂಡರಗಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಗದಗ ಜಿಲ್ಲೆ ಮುಂಡರಗಿ ತಾಲ್ಲೂಕು ಡಂಬಳ ಗ್ರಾಮದಲ್ಲಿ ಹಾಲಿ ಇರುವ ಪೊಲೀಸ್ ಔಟ್ ಪೋಸ್ಟನ್ನು ಮೇಲ್ದರ್ಜೆಗೇರಿಸಿ ಪೊಲೀಸ್ ಠಾಣೆ ಮಾಡಲಾಗುವುದೇ ?

ಆ) ಹಾಗಿದ್ದಲ್ಲಿ, ಯಾವಾಗ ಮೇಲ್ದರ್ಜೆಗೇರಿಸಲಾಗುವುದು?

ಶ್ರೀ ಎನ್. ಧರ್ಮಸಿಂಗ್ ( ಮುಖ್ಯಮಂತ್ರಿಗಳು) :

ಅ) ಈ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಬಂದಿಲ್ಲ. ಬಂದ ನಂತರ ಪರಿಶೀಲಿಸಲಾಗುವುದು.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

312(416) ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಲಖನಗಾಂವ ಗ್ರಾಮದ ಬಳಿ ನಿರ್ಮಿಸುತ್ತಿರುವ ಬ್ರಿಡ್ಜ್ ಕಂ ಬ್ಯಾರೇಜ್ ಕಾಮಗಾರಿ ಈಗ ಯಾವ ಹಂತದಲ್ಲಿದೆ;

ಆ) ಈ ಕಾಮಗಾರಿ ಯಾವಾಗ ಪೂರ್ಣಗೊಳ್ಳಬೇಕಾಗಿತ್ತು;

ಇ) ಈ ಕಾಮಗಾರಿಯು ನಿಗದಿತ ಕಾಲ ಮಿತಿಯೊಳಗೆ ಪೂರ್ಣಗೊಳ್ಳದೇ ಇರಲು ಕಾರಣವೇನು ;

ಈ) ಇದನ್ನು ಪೂರ್ಣಗೊಳಿಸಲು ಏನುಕ್ರಮ ಕೈಗೊಳ್ಳಲಾಗುವುದು ?